ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ    ದಿನಾಂಕ : DATE: 20/1/21

# ಮತ್ತೆ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ

20/1/21

ಸಂ.ಕ.ಸಮಾಚಾರ ಬೆಂಗಳೂರು

ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿ ವಿರುದ್ಧ ಮತ್ತೆ ಅವಿಶ್ವಾಸ ನಿರ್ಣಯ ಮಂಡಿಸಲು ಪರಿಷತ್‌ನ ಬಿಜೆಪಿ ಸದಸ್ಯರು ಮುಂದಾಗಿದ್ದಾರೆ.

ಈ ಸಂಬಂಧ ವಿಧಾನಪರಿಷತ್‌ನ ಕಾರ್ಯದರ್ಶಿಗಳಿಗೆ ಹಾಲಿ ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿಗೆ ನೋಟಿಸ್ ನೀಡಬೇಕೆಂದು ಬಿಜೆಪಿಯ 10ಕ್ಕೂ ಹೆಚ್ಚು ಸದಸ್ಯರು ಒತ್ತಾಯಿಸಿದ್ದಾರೆ.

ಕಳೆದ ಡಿ.15ರಂದು ಸಭಾಪತಿ ಪ್ರತಾಪ್‌ಚಂದ್ರಶೆಟ್ಟಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆ ವೇಳೆ ಸದನದಲ್ಲಿ ಭಾರಿ ಗದ್ದಲಕ್ಕೆ ಎಡಮಾಡಿಕೊಟ್ಟಿತ್ತು. ಇದೀಗ ಮತ್ತೆ ಬಿಜೆಪಿ ಸದಸ್ಯರು ಹಾಲಿ ಸಭಾಪತಿಗಳ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆಗೆ ಮುಂದಾಗಿರುವುದು ನೋಡಿದರೆ ಸಭಾಪತಿ ಸ್ಥಾನದಿಂದ ಪ್ರತಾಪ್‌ಚಂದ್ರಶೆಟ್ಟಿ ಅವರನ್ನು ಇಳಿಸುವ ಪ್ರಕ್ರಿಯೆ ಇನ್ನೂ ಜೀವಂತವಾಗಿದೆ ಎಂಬುವುದು ಕಂಡುಬರುತ್ತಿದೆ.

## 29 ಉಪ ಸಭಾಪತಿ ಸ್ಥಾನಕ್ಕೆ ಚುನಾವಣೆ

ಜೆಡಿಎಸ್‌ನ ಧರ್ಮೇಗೌಡ ಅವರ ಅಕಾಲಿಕ ಮರಣದಿಂದ ತೆರವಾಗಿದ್ದ ವಿಧಾನ ಪರಿಷತ್ ಉಪಸಭಾಪತಿ ಸ್ಥಾನಕ್ಕೆ ಜ.29ರಂದು ಚುನಾವಣೆ ನಡೆಯಲಿದೆ. ಜ.28ರಿಂದ ವಿಧಾನಮಂಡಲದ ಅಧಿವೇಶನ ಪ್ರಾರಂಭಗೊಳ್ಳಲಿದೆ. ಚುನಾವಣೆಯ ಹಿಂದಿನ ದಿನ 28ರಂದು ಮಧ್ಯಾಹ್ನ 3 ಗಂಟೆಗೆ ಮೊದಲು ಯಾವುದೇ ಕಾಲದಲ್ಲಿ ಯಾವುದೇ ಸದಸ್ಯರು ಇನ್ನೊಬ್ಬ ಸದಸ್ಯರನ್ನು ಉಪಸಭಾಪತಿ ಸ್ಥಾನಕ್ಕೆ ಆರಿಸಿ ಲಿಖಿತ ಸೂಚನೆಯ ಮೂಲಕ ವಿಧಾನಸಭಾ ಕಾರ್ಯದರ್ಶಿಯವರಿಗೆ ತಲುಪಿಸಬೇಕಾಗಿದೆ.